Akashvani: Bangalore
Regional Bulletin In Kannada
18.08.2025 : 14.30hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

18.08.2025 : 14.30 hrs

*******

**ಮುಖ್ಯಾಂಶಗಳು:**

1. ಬೆಂಗಳೂರಿನ ಹೆಬ್ಬಾಳ ಮೇಲ್ಸೇತುವೆ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
2. ೪೨ ಸಾವಿರದ ೩೪೫ ಮನೆಗಳು ಶೀಘ್ರವೇ ಫಲಾನುಭವಿಗಳಿಗೆ ಹಸ್ತಾಂತರ - ವಿಧಾನಸಭೆಯಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್ ಸ್ಪಷ್ಟನೆ
3. ೫೪೦ ಗಸ್ತು ಅರಣ್ಯ ರಕ್ಷಕರ ನೇಮಕಾತಿಗೆ ಪ್ರಕ್ರಿಯೆ ಪ್ರಗತಿಯಲ್ಲಿ - ಮೇಲ್ಮನೆಗೆ ಸಚಿವ ಈಶ್ವರ ಖಂಡ್ರೆ ಮಾಹಿತಿ
4. ಮುಖ್ಯಮಂತ್ರಿ ವಿರುದ್ಧ ಮತ ವಂಚನೆ ಆರೋಪ; ಚುನಾವಣಾ ಆಯೋಗಕ್ಕೆ ದೂರು ನೀಡಲು ಬಿಜೆಪಿ ನಿರ್ಧಾರ
5. ವಾಯುಭಾರ ಕುಸಿತದಿಂದ ರಾಜ್ಯದ ವಿವಿಧೆಡೆ ಧಾರಾಕಾರ ಮಳೆ; ಕರಾವಳಿ, ಕೊಡಗು, ಚಿಕ್ಕಮಗಳೂರಿನಲ್ಲಿ ರೆಡ್ ಅಲರ್ಟ್ ಘೋಷಣೆ

*********

ಬೆಂಗಳೂರಿನಲ್ಲಿ ಕೆ.ಆರ್.ಪುರ ಕಡೆಯಿಂದ ಮೇಖ್ರಿ ವೃತ್ತದ ಕಡೆ ವಾಹನಗಳ ಸರಾಗ ಸಂಚಾರಕ್ಕೆ ಅನುವಾಗುವಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹೆಬ್ಬಾಳದಲ್ಲಿ ನಿರ್ಮಿಸಿರುವ ಮೇಲ್ಸೇತುವೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಲೋಕಾರ್ಪಣೆಗೊಳಿಸಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಬೈರತಿ ಸುರೇಶ್, ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರಿಸ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಜೀರ್ ಅಹ್ಮದ್, ಮಾಜಿ ಸಂಸದೆ ರಮ್ಯಾ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

*********

೪೨ ಸಾವಿರದ ೩೪೫ ಮನೆಗಳನ್ನು ಫಲಾನುಭವಿಗಳಿಗೆ ಹಸ್ತಾಂತರಿಸಲು ಮುಂದಿನ ತಿಂಗಳು ಬೃಹತ್ ಸಮಾರಂಭ ನಡೆಸಲಾಗುವುದು  ಎಂದು ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿಂದು ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಸಿದ್ದು ಪಾಟೀಲ್ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಸರ್ಕಾರ ಈಗಾಗಲೇ ೩೬ ಸಾವಿರದ ೭೮೯ ಮನೆಗಳನ್ನು ನೀಡಲಾಗಿದೆ, ಇದೀಗ ಮತ್ತೆ ೪೨ ಸಾವಿರದ ೩೪೫ ಮನೆಗಳನ್ನು ಫಲಾನುಭವಿಗಳಿಗೆ ಹಸ್ತಾಂತರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ, ಮೈಸೂರು ತಾಲ್ಲೂಕಿನ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಕೊಳಚೆ ನಿರ್ಮೂಲನ ಮಂಡಳಿ ವತಿಯಿಂದ ನಿರ್ಮಾಣಗೊಂಡಿರುವ ಬಡಾವಣೆಗಳ ಅಭಿವೃದ್ಧಿಗೆ ೫ ಕೋಟಿ ರೂಪಾಯಿ ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ಹೇಳಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿಂದು ಜೆಡಿಎಸ್ ಸದಸ್ಯ ಜಿ.ಟಿ.ದೇವೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಿರ್ಮಾಣಗೊಂಡಿರುವ ಬಡಾವಣೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಈಗಾಗಲೇ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

*********

ಅರಣ್ಯ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ನೀಗಿಸಲು ಕ್ರಮ ವಹಿಸಲಾಗಿದ್ದು, ೫೪೦ ಅರಣ್ಯ ರಕ್ಷಕರ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ವಿಧಾನಪರಿಷತ್ತಿನಲ್ಲಿಂದು ಎಸ್. ಕೇಶವ ಪ್ರಸಾದ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಕಾಡಾನೆ ದಾಳಿ, ಹುಲಿ ದಾಳಿ ಸೇರಿದಂತೆ ವನ್ಯಜೀವಿ ದಾಳಿಯಿಂದ ಮೃತಪಟ್ಟವರಿಗೆ ೨೦ ಲಕ್ಷ ರೂಪಾಯಿ ಹಾಗೂ ಹಾವು ಕಚ್ಚಿ ಮೃತಪಟ್ಟವರಿಗೆ ಕೃಷಿ ಇಲಾಖೆಯ ವತಿಯಿಂದ ೨ ಲಕ್ಷ ರೂಪಾಯಿ ಪರಿಹಾರ ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. ದಕ್ಷಿಣ ಕನ್ನಡ ಜಿಲ್ಲೆಗೆ ಪ್ರತ್ಯೇಕವಾಗಿ ಆನೆ ಕಾರ್ಯಪಡೆ ಮಂಜೂರು ಮಾಡಲು ಸೂಚಿಸಲಾಗಿದ್ದು, ೨-೩ ದಿನಗಳಲ್ಲಿ ಅಧಿಕೃತವಾಗಿ ಪ್ರಕಟಿಸಲಾಗುವುದು. ಆನೆಪಥ ಮತ್ತು ಆವಾಸಸ್ಥಾನ ಸಂರಕ್ಷಣೆಗಾಗಿ ಅಧ್ಯಯನ ನಡೆಸಲು ಐಐಎಸ್‌ಸಿಯೊಂದಿಗೆ ತಿಳಿವಳಿಕೆ ಒಪ್ಪಂದ ಮಾಡಿಕೊಳ್ಳಲಾಗಿದ್ದು, ಪ್ರೊ. ಆರ್. ಸುಕುಮಾರ್ ಅವರ ತಂಡ ಅಧ್ಯಯನ ಆರಂಭಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಮಂಗಗಳ ಹಾವಳಿಯಿಂದ ಬೆಳೆ ಹಾನಿ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಮಂಗಳನ್ನು ಹಿಡಿಯಲು ಸೂಚನೆ ನೀಡುವುದಾಗಿ ಸದನಕ್ಕೆ ತಿಳಿಸಿದ್ದಾರೆ.

*********

ವಿಧಾನಮಂಡಲದ ಉಭಯ ಸದನಗಳಲ್ಲಿಂದು ಇತ್ತೀಚೆಗೆ ನಿಧನರಾದ ಜ್ಞಾನ ದಾಸೋಹಿ ಡಾ. ಶರಣಬಸಪ್ಪ ಅಪ್ಪ ಹಾಗೂ ವಿಶ್ವ ಒಕ್ಕಲಿಗರ ಸಂಸ್ಥಾನ ಮಠದ ಚಂದ್ರಶೇಖರನಾಥ ಸ್ವಾಮೀಜಿ ನಿಧನಕ್ಕೆ ಸಂತಾಪ ಸೂಚಿಸಲಾಯಿತು. ವಿಧಾನಸಭೆಯಲ್ಲಿ ಸಭಾಧ್ಯಕ್ಷ ಯು.ಟಿ. ಖಾದರ್ ಸಂತಾಪ ನಿರ್ಣಯ ಮಂಡಿಸಿದರು. ಶರಣಬಸಪ್ಪ ಅಪ್ಪ ಅವರು ಕಲಬುರಗಿಯಲ್ಲಿ ೬೦ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಶೈಕ್ಷಣಿಕ ಕ್ರಾಂತಿಯನ್ನೇ ಮಾಡಿದರು ಎಂದು ಶ್ಲಾಘಿಸಿದರು. ಚಂದ್ರಶೇಖರನಾಥ ಸ್ವಾಮೀಜಿ ಅವರು, ಧಾರ್ಮಿಕ, ಸಾಮಾಜಿಕ ಹಾಗೂ ಆಧ್ಯಾತ್ಮಿಕ ಕ್ಷೇತ್ರಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದು ಬಣ್ಣಿಸಿದರು. ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸಿದ ಸಚಿವ ಶಿವಾನಂದ ಪಾಟೀಲ್, ವಿಪಕ್ಷ ನಾಯಕ ಆರ್. ಅಶೋಕ, ಬಿಜೆಪಿ ಸದಸ್ಯರಾದ ಅರವಿಂದ್ ಬೆಲ್ಲದ್, ಬಿ.ವೈ. ವಿಜಯೇಂದ್ರ ಅಗಲಿದ ಗಣ್ಯರ ಸೇವೆಯನ್ನು ಸ್ಮರಿಸಿ ಶ್ರದ್ಧಾಂಜಲಿ ಸಲ್ಲಿಸಿದರು.

*********

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮತ ವಂಚನೆ ಆರೋಪ ಕುರಿತಂತೆ ನಾಳೆ ಇಲ್ಲವೆ ನಾಡಿದ್ದು ಚುನಾವಣಾ ಆಯೋಗಕ್ಕೆ ದೂರು ನೀಡುವುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಧಾನಸಭೆಯಲ್ಲಿಂದು ಎಲ್ಲಾ ಗೊಂದಲಕ್ಕೆ ಗೃಹ ಸಚಿವ ಪರಮೇಶ್ವರ್ ತೆರೆ ಎಳೆಯಲಿದ್ದಾರೆ ಎಂಬ ವಿಶ್ವಾಸವಿದೆ ಎಂದು ಹೇಳಿದ್ದಾರೆ. ಅಪಪ್ರಚಾರಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಏಕೆ ಕ್ರಮ ಕೈಗೊಂಡಿಲ್ಲ ಎಂದು ಪ್ರಶ್ನಿಸಿದ್ದಾರೆ. ಅಪಪ್ರಚಾರ ಕೈಗೊಂಡವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

*********

ವಾಯುಭಾರ ಕುಸಿತ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ ಧಾರಾಕಾರ ಮಳೆಯಾಗುತ್ತಿದೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರವಾಗಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೃಷ್ಣರಾಜಸಾಗರ ಜಲಾಶಯಕ್ಕೆ ಒಳಹರಿವು ಪ್ರಮಾಣ ಮತ್ತಷ್ಟು ಹೆಚ್ಚಾಗುತ್ತಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಅಣೆಕಟ್ಟೆಯಿಂದ ೮೦ ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಹೊರಬಿಡಲಾಗುತ್ತಿದೆ. ಕಾವೇರಿ ನದಿ ಪಾತ್ರಕ್ಕೆ ಹಾಗೂ ತಗ್ಗು ಪ್ರದೇಶಗಳಿಗೆ ಭೇಟಿ ನೀಡುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಮೂರ್ನಾಲ್ಕು ದಿನಗಳಿಂದ ನಿರಂತರ ಮಳೆಯಿಂದಾಗಿ ಜನ ಜೀವನ ಅಸ್ತವ್ಯಸ್ತವಾಗಿದೆ. ಪಶ್ಚಿಮಘಟ್ಟ ಪ್ರದೇಶದಲ್ಲಿ ಧಾರಾಕಾರ ಮಳೆಯಿಂದಾಗಿ ಮಲಪ್ರಭಾ ನದಿ ಮೈದುಂಬಿ ಹರಿಯುತ್ತಿದೆ. ನದಿಯ ಒಳಹರಿವು ಹೆಚ್ಚಳದ ಕಾರಣ ಸವದತ್ತಿ ತಾಲೂಕಿನ ನವಿಲು ತೀರ್ಥ ಜಲಾಶಯ ಭರ್ತಿಯಾಗಿದ್ದು, ೪ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದೆ. ಮಲಪ್ರಭಾ ನದಿ ತೀರ ಜನರು ಎಚ್ಚರಿಕೆಯಿಂದ ಇರುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ. ಕಳೆದ ಎರಡು ದಿನಗಳಿಂದ ದಾವಣಗೆರೆ ಜಿಲ್ಲಾದ್ಯಂತ ವ್ಯಾಪಕ

ಮಳೆಯಾಗುತ್ತಿದ್ದು, ಜನ ಜೀವನ ಬಾಧಿತಗೊಂಡಿದೆ. ಭದ್ರಾ ಜಲಾಶಯ ಸಂಪೂರ್ಣ ಭರ್ತಿಯಾದ ಪರಿಣಾಮ ೩೯ ಸಾವಿರ ಕ್ಯೂಸೆಕ್ ಅಧಿಕ ನೀರನ್ನು ನದಿಗೆ ಬಿಡಲಾಗಿದ್ದು, ನದಿ ಪಾತ್ರದ ಹೊನ್ನಾಳಿ, ಹರಿಹರ, ಹರಪನಹಳ್ಳಿ ತಾಲ್ಲೂಕಿನ ಗ್ರಾಮಗಳ ಜನರು ಎಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಸೂಚಿಸಿದೆ. ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಭಾರಿ ಮಳೆಯಾಗುತ್ತಿದ್ದು, ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯದ ಒಳಹರಿವಿನಲ್ಲಿ ಏರಿಕೆಯಾಗಿದೆ. ಕೊಡಗು ಜಿಲ್ಲೆಯಲ್ಲಿಯೂ ವರುಣನ ಅಬ್ಬರ ಮುಂದುವರೆದಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಜಿಲ್ಲೆಯಲ್ಲಿ ಆರೆಂಜ್ ಅಲರ್ಟ್ ಘೋಷಿತವಾಗಿದೆ. ಇತ್ತೀಚಿನ ವರ್ಷಗಳಲ್ಲೇ ಅತೀ ಹೆಚ್ಚಿನ ಶೀತ ಗಾಳಿ ಬೀಸುತ್ತಿದ್ದು ಚಳಿಯ ತೀವ್ರತೆ ಹೆಚ್ಚಾಗಿದೆ. ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲೂ ನಿರಂತರವಾಗಿ ಮಳೆಯಾಗುತ್ತಿದೆ.

*********

ಕೃಷ್ಣರಾಜ ಸಾಗರ ಜಲಾಶಯಕ್ಕೆ ಭಾರೀ ಪ್ರಮಾಣದಲ್ಲಿ ಒಳಹರಿವು ಹೆಚ್ಚಿ ನೀರು ಹೊರಬಿಡುತ್ತಿರುವ ಹಿನ್ನೆಲೆಯಲ್ಲಿ ಆದಷ್ಟು ಶೀಘ್ರ ಮಂಡ್ಯ ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಡಾ.ಕುಮಾರ ಅವರೊಂದಿಗೆ ದೂರವಾಣಿ ಕರೆ ಮಾಡಿ ಮಾತನಾಡಿರುವ ಅವರು, ತಕ್ಷಣವೇ ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವಂತೆ ನಿರ್ದೇಶನ ನೀಡಿದ್ದಾರೆ.

*********

ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುತ್ತಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಶಿವಮೊಗ್ಗ, ಕೊಡಗು, ಚಿಕ್ಕಮಗಳೂರು, ಹಾಸನ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುತ್ತಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಮುಂದಿನ ಮೂರು ದಿನ ಈ ಭಾಗದಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಅರಬ್ಬಿ ಸಮುದ್ರದಲ್ಲಿ ಭಾರಿ ಗಾತ್ರದ ಅಲೆಗಳು ಉದ್ಭವಿಸುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯಬಾರದು ಎಂದು ಎಚ್ಚರಿಕೆ ನೀಡಲಾಗಿದೆ. ಬೆಂಗಳೂರಿನಲ್ಲೂ ಇಂದು ಮಳೆಯಾಗುವ ಸಾಧ್ಯತೆ ಇದೆ.

*********

ರಾಜ್ಯದ ಕುರಿಗಾಹಿಗಳ ಹಿತರಕ್ಷಣೆಗೆ ಸರ್ಕಾರ ಬದ್ಧವಾಗಿದೆ ಎಂದು ಪಶುವೈದ್ಯಕೀಯ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ಕುರಿಗಾರರ ದೌರ್ಜನ್ಯ ತಡೆ ಕಾಯ್ದೆಯ ಕರಡು ಸಿದ್ದವಾಗಿದ್ದು ಮುಂದಿನ ಸಚಿವ ಸಂಪುಟದಲ್ಲಿ ಒಪ್ಪಿಗೆ ಪಡೆದು, ಅಧಿವೇಶನದಲ್ಲಿ ಮಂಡಿಸಲಾಗುವುದು ಎಂದು ಹೇಳಿದ್ದಾರೆ. ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕುರಿಗಾಹಿಗಳ ಸ್ವತ್ತುಗಳ ರಕ್ಷಣೆ, ಪರಿಹಾರ ಯೋಜನೆಗಳು, ವೈದ್ಯರ ನೇಮಕಾತಿ, ಪೊಲೀಸ್ ರಕ್ಷಣೆಗಾಗಿ ಕರ್ನಾಟಕ ಸಾಂಪ್ರದಾಯಿಕ ವಲಸೆ ಕುರಿಗಾಹಿಗಳ ಮಸೂದೆ ೨೦೨೫ರ ಕರಡನ್ನು ಸಿದ್ದಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

*****END****